Akashvani: Bangalore
National Bulletin In Kannada
03.01.2026 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*********

ಮುಖ್ಯಾಂಶಗಳು:

1. ನವದೆಹಲಿಯಲ್ಲಿಂದು ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಅಂತಾರಾಷ್ಟ್ರೀಯ ಪ್ರದರ್ಶನಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಆಪರೇಷನ್ ಸಿಂದೂರ ಸಮಯದಲ್ಲಿ ಪಂಜಾಬ್‌ನಲ್ಲಿರುವ ಭಾರತೀಯ ಮಿಲಿಟರಿ ಸೌಲಭ್ಯಗಳ ಮೇಲೆ ಪಾಕಿಸ್ತಾನದ ದಾಳಿ ಆರೋಪ ನಿರಾಧಾರ - ಭಾರತೀಯ ಸೇನೆ
3. ದೇಶದ ಬೆಳವಣಿಗೆಯಲ್ಲಿ ನಾವೀನ್ಯತೆ ಆಧಾರಿತ ವಲಯಗಳು ಪ್ರಮುಖ ಪಾತ್ರ ವಹಿಸಲಿವೆ - ಸಚಿವ ಡಾ. ಜಿತೇಂದ್ರ ಸಿಂಗ್ ಅಭಿಮತ
4. ಹತ್ತೊಂಬತ್ತು ವರ್ಷದೊಳಗಿನವರ ಪುರುಷರ ಏಕದಿನ ಕ್ರಿಕೆಟ್; ಇಂದು ಭಾರತ - ದಕ್ಷಿಣ ಆಫ್ರಿಕಾ ಮುಖಾಮುಖಿ

************

ನವದೆಹಲಿಯ ರಾಯ್ ಪಿಥೋರಾ ಸಾಂಸ್ಕೃತಿಕ ಸಂಕೀರ್ಣದಲ್ಲಿ ಇಂದು ನಡೆಯಲಿರುವ ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಅಂತಾರಾಷ್ಟ್ರೀಯ ಪ್ರದರ್ಶನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಈ ಪ್ರದರ್ಶನವು ನವದೆಹಲಿಯ ರಾಷ್ಟ್ರೀಯ ವಸ್ತುಸಂಗ್ರಹಾಲಯ ಮತ್ತು ಕೋಲ್ಕತ್ತಾದ ಭಾರತೀಯ ವಸ್ತುಸಂಗ್ರಹಾಲಯದ ಸಂಗ್ರಹಗಳಲ್ಲಿ ಸಂರಕ್ಷಿಸಲಾಗಿರುವ ಪಿಪ್ರಹ್ವಾ ಅಧಿಕೃತ ಅವಶೇಷಗಳು ಮತ್ತು ಪುರಾತತ್ತ್ವ ವಸ್ತುಗಳನ್ನು ಒಂದು ಶತಮಾನಕ್ಕೂ ಹೆಚ್ಚು ಕಾಲದ ನಂತರ ಮೊದಲ ಬಾರಿಗೆ, ಒಂದೆಡೆ ಒಟ್ಟುಗೂಡಿಸುತ್ತದೆ.೧೮೯೮ರಲ್ಲಿ ಪತ್ತೆಯಾದ ಪಿಪ್ರಹ್ವಾ ಅವಶೇಷಗಳು ಆರಂಭಿಕ ಬೌದ್ಧಧರ್ಮದ ಪುರಾತತ್ತ್ವ ಅಧ್ಯಯನದಲ್ಲಿ ಕೇಂದ್ರ ಸ್ಥಾನವನ್ನು ಹೊಂದಿವೆ. ಇವು ಭಗವಾನ್ ಬುದ್ಧನಿಗೆ ನೇರವಾಗಿ ಸಂಬಂಧಿಸಿದ ಐತಿಹಾಸಿಕವಾಗಿ ಮಹತ್ವದ ಅವಶೇಷಗಳಲ್ಲಿ ಸೇರಿವೆ. ಪುರಾತತ್ತ್ವ ಶಾಸ್ತ್ರದ ಪುರಾವೆಗಳು ಪಿಪ್ರಹ್ವಾ ಸ್ಥಳವನ್ನು ಪ್ರಾಚೀನ

ಕಪಿಲವಸ್ತುವಿನೊಂದಿಗೆ ಸಂಯೋಜಿಸುತ್ತವೆ. ಇದನ್ನು ಭಗವಾನ್ ಬುದ್ಧನು ವೈರಾಗ್ಯ ತಾಳುವ ಮೊದಲು ತನ್ನ ಆರಂಭಿಕ ಜೀವನವನ್ನು ಕಳೆದ ಸ್ಥಳವೆಂದು ಗುರುತಿಸಲಾಗಿದೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ.ಬೌದ್ಧ ಬೋಧನೆಗಳೊಂದಿಗೆ ಭಾರತೀಯ ನಾಗರಿಕತೆಯ ಸಂಪರ್ಕಗಳನ್ನು ಮತ್ತು ಆಧ್ಯಾತ್ಮಿಕ, ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಸರ್ಕಾರದ ಪ್ರಯತ್ನಗಳನ್ನು ಈ ಪ್ರದರ್ಶನ ಒತ್ತಿಹೇಳುತ್ತದೆ.

************

ಅಭಿವೃದ್ಧಿ ಹೊಂದಿದ ಭಾರತವನ್ನು ಆರ್ಥಿಕ ಶಕ್ತಿ ಮತ್ತು ತಾಂತ್ರಿಕ ಪ್ರಗತಿಯಿಂದ ಮಾತ್ರವಲ್ಲದೆ ಸಾಮಾಜಿಕ ಸೇರ್ಪಡೆಯಿಂದಲೂ ವ್ಯಾಖ್ಯಾನಿಸಲಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ಚೆನ್ನೈನಲ್ಲಿ ನಿನ್ನೆ ನಡೆದ ರಾಮನಾಥ್ ಗೋಯಂಕ ಸಾಹಿತ್ಯ ಸಮ್ಮಾನ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳಿಗೆ ಸುದ್ದಿ ಪತ್ರಿಕೆಗಳು ಹೆಚ್ಚು ಪ್ರಾಮುಖ್ಯತೆ ನೀಡಬೇಕು ಎಂದು ಒತ್ತಾಯಿಸಿದರು. ಭಾರತದ ಎಲ್ಲ ಭಾಷೆಗಳು ಮತ್ತು ಸಂಸ್ಕೃತಿಗಳು ಒಟ್ಟಾಗಿ ಮುಂದುವರಿಯುವುದರೊಂದಿಗೆ ದೇಶದ ಪ್ರಗತಿಯನ್ನು ಒಳಗೊಳ್ಳಬೇಕು. ಭಾರತೀಯ ಭಾಷೆಗಳು ಮತ್ತು ಸಂಪ್ರದಾಯಗಳನ್ನು ಉತ್ತೇಜಿಸಲು ಸರ್ಕಾರ ಅನೇಕ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಹೇಳಿದರು. ಸಮಾರಂಭದಲ್ಲಿ ಜೀವಮಾನ ಸಾಧನೆ ಪ್ರಶಸ್ತಿಯನ್ನು ಕನ್ನಡದ ಖ್ಯಾತ ಬರಹಗಾರ ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ. ಚಂದ್ರಶೇಖರ ಕಂಬಾರ ಅವರಿಗೆ ಪ್ರದಾನ ಮಾಡಲಾಯಿತು. ಇದೇ ವೇಳೆ ಅತ್ಯುತ್ತಮ ಕಾದಂಬರಿ ಪ್ರಶಸ್ತಿಯನ್ನು ಅರುಣಾಚಲಪ್ರದೇಶದ ಸುಬಿ ತಬಾ ಹಾಗೂ ಕಾದಂಬರಿಯೇತರ ಪ್ರಶಸ್ತಿಯನ್ನು ಶುಭಾಂಶು ಚಕ್ರವರ್ತಿ ಅವರಿಗೆ ಪ್ರದಾನ ಮಾಡಲಾಯಿತು.

************

ಆಪರೇಷನ್ ಸಿಂದೂರ ಸಮಯದಲ್ಲಿ ಪಂಜಾಬ್‌ನಲ್ಲಿರುವ ಭಾರತೀಯ ಮಿಲಿಟರಿ ಸೌಲಭ್ಯಗಳ ಮೇಲೆ ದಾಳಿ ಮಾಡಲಾಗಿದೆ ಎಂಬ ಪಾಕಿಸ್ತಾನದ ಹೇಳಿಕೆಯನ್ನು ಭಾರತ ತಿರಸ್ಕರಿಸಿದೆ.

ಪಾಕಿಸ್ತಾನ ದಾರಿ ತಪ್ಪಿಸುವ ಮತ್ತು ಸುಳ್ಳು ಸುದ್ದಿಗಳನ್ನು ಪ್ರಸಾರ ಮಾಡುತ್ತಿದೆ ಎಂದು

ಭಾರತೀಯ ಸೇನೆಯ ಮೂಲಗಳು ತಿಳಿಸಿವೆ. ಭಾರತೀಯ ಮಿಲಿಟರಿ ಸೌಲಭ್ಯಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ತಪ್ಪಾಗಿ ಹೇಳಿಕೊಂಡು, ಪಾಕಿಸ್ತಾನ, ದಾರಿತಪ್ಪಿಸುವ ಮತ್ತು ಪರಿಶೀಲಿಸದ ಉಪಗ್ರಹ ಚಿತ್ರಗಳನ್ನು ಪ್ರಸಾರ ಮಾಡುತ್ತಿದೆ. ಚಿತ್ರಗಳಲ್ಲಿ ತೋರಿಸಿರುವ ಸ್ಥಳಗಳ ಸ್ವತಂತ್ರ ಪರಿಶೀಲನೆಯು ಅಲ್ಲಿ ಯಾವುದೇ ವಿನಾಶ ಗೋಚರಿಸುತ್ತಿಲ್ಲ ಎಂಬುದನ್ನು ಖಚಿತಪಡಿಸುವುದರಿಂದ, ಈ ಹೇಳಿಕೆಗಳು ಸತ್ಯಕ್ಕೆ ದೂರವಾಗಿದೆ. ಪೋಸ್ಟ್‌ಗಳಲ್ಲಿ ಉಲ್ಲೇಖಿಸಲಾದ ಭಾರತೀಯ ಮಿಲಿಟರಿ ಸೌಲಭ್ಯಗಳು ಹಾಗೆಯೇ ಉಳಿದಿವೆ. ಸ್ಫೋಟದ ಪರಿಣಾಮ ಅಥವಾ ಹಾನಿಯ ಯಾವುದೇ ಲಕ್ಷಣಗಳಿಲ್ಲ ಎಂದು ಭಾರತೀಯ ಸೇನೆಯ ಮೂಲಗಳು ತಿಳಿಸಿವೆ.

************

ಎಲೆಕ್ಟ್ರಾನಿಕ್ಸ್ ಉತ್ಪಾದನಾ ಘಟಕಗಳ ಯೋಜನೆಯ ಮೂರನೇ ಕಂತಿನಡಿ ಕೇಂದ್ರ ಸರ್ಕಾರ ೨೨ ಹೊಸ ಪ್ರಸ್ತಾವನೆಗಳನ್ನು ಅನುಮೋದಿಸಿದೆ. ಇದಕ್ಕೆ ೪೧ ಸಾವಿರದ ೮೬೩ ಕೋಟಿ ರೂಪಾಯಿಗಳ ಅಂದಾಜು ಹೂಡಿಕೆ ಅಗತ್ಯವಿದೆ. ಮೊಬೈಲ್ ಉತ್ಪಾದನೆ, ದೂರಸಂಪರ್ಕ, ಎಲೆಕ್ಟ್ರಾನಿಕ್ಸ್, ಆಟೊಮೊಟೀವ್ ಮತ್ತು ಐಟಿ ಹಾರ್ಡ್‌ವೇರ್ ಸೇರಿದಂತೆ ೧೧ ಉತ್ಪನ್ನಗಳ ಉತ್ಪಾದನೆಯನ್ನು ಇದು ಒಳಗೊಂಡಿದೆ. ಈ ಯೋಜನೆಗಳು ೨ ಲಕ್ಷ ೫೮ ಸಾವಿರ ಕೋಟಿ ರೂಪಾಯಿ ಮೌಲ್ಯದ ಉತ್ಪಾದನೆಯನ್ನು ಹಾಗೂ ಸುಮಾರು ೩೪ ಸಾವಿರ ನೇರ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆ ಇದೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಈ ವರ್ಷ ನಾಲ್ಕು ಘಟಕಗಳು ಅರೆವಾಹಕಗಳ ವಾಣಿಜ್ಯ ಉತ್ಪಾದನೆಯನ್ನು ಪ್ರಾರಂಭಿಸಲು ಸಿದ್ಧವಾಗಿವೆ. ಎಲೆಕ್ಟ್ರಾನಿಕ್ಸ್ ಪೂರೈಕೆ ಸರಪಳಿಯಲ್ಲಿ ಭಾರತ ಆತ್ಮನಿರ್ಭರತೆ ಸಾಧಿಸಲು ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಯೋಜನೆಯನ್ನು ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು. ಈ ಯೋಜನೆಗಳ ಅಡಿಯಲ್ಲಿ ಕರ್ನಾಟಕ, ಆಂಧ್ರಪ್ರದೇಶ, ಹರಿಯಾಣ, ಮಧ್ಯಪ್ರದೇಶ, ಮಹಾರಾಷ್ಟ್ರ, ತಮಿಳುನಾಡು, ಉತ್ತರ ಪ್ರದೇಶ ಮತ್ತು ರಾಜಸ್ಥಾನ ಸೇರಿ ಒಟ್ಟು ೮ ರಾಜ್ಯಗಳಲ್ಲಿ ಘಟಕಗಳ ಸ್ಥಾಪನೆಯಾಗಲಿದೆ ಎಂದು ಅವರು ಮಾಹಿತಿ ನೀಡಿದರು.

************

ಉನ್ನತ ಶಿಕ್ಷಣ ಪಡೆದ ವ್ಯಕ್ತಿಗಳು ಮತ್ತು ಪ್ರತಿಷ್ಠಿತ ವೃತ್ತಿಗಳಲ್ಲಿ ತೊಡಗಿರುವವರು ದೇಶ ಮತ್ತು ಸಮಾಜ ವಿರೋಧಿ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿರುವುದು ಕಳವಳಕಾರಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೇಸರ ವ್ಯಕ್ತಪಡಿಸಿದರು. ರಾಜಸ್ತಾನದ ಉದಯಪುರದಲ್ಲಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಆಧುನಿಕ ಭಾರತ ತನ್ನ ಪ್ರಾಚೀನ ಇತಿಹಾಸ ಮತ್ತು ಸಾಂಸ್ಕೃತಿಕ ಸಂಪ್ರದಾಯಗಳನ್ನು ಗುರುತಿಸುವುದರಿಂದ ಶಕ್ತಿ ಮತ್ತು ಹೆಮ್ಮೆ ಪಡೆಯುತ್ತದೆ ಎಂದು ಹೇಳಿದರು.    ದೆಹಲಿ ಬಾಂಬ್ ಸ್ಫೋಟ ಪ್ರಕರಣದಲ್ಲಿ ವೈದ್ಯರಂತಹ ಉನ್ನತ ವೃತ್ತಿಪರರು ಭಾಗಿಯಾಗಿರುವುದು ಕಳವಳಕಾರಿಯಾಗಿದೆ. ಇದು ಶಿಕ್ಷಣದ ಜೊತೆಗೆ ವ್ಯಕ್ತಿತ್ವ ನಿರ್ಮಾಣ ಮತ್ತು ನೈತಿಕ ಪ್ರಜ್ಞೆಯ ಮಹತ್ವವನ್ನು ಸ್ಪಷ್ಟವಾಗಿ ಎತ್ತಿ ತೋರುತ್ತದೆ ಎಂದರು.

****ಧ್ವನಿ *** ರಾಜನಾಥ್ ಸಿಂಗ್ (೧೮ ಸೆಕೆಂಡ್ಸ್)

ರಕ್ಷಣಾ ಉತ್ಪಾದನಾ ಕ್ಷೇತ್ರದಲ್ಲಿ ಭಾರತ ಸಂಪೂರ್ಣವಾಗಿ ಸ್ವಾವಲಂಬಿಯಾಗುವತ್ತ ಸಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

************

ಸಣ್ಣ ಮತ್ತು ಮಾಡ್ಯುಲರ್ ಪರಮಾಣು ರಿಯಾಕ್ಟರ್‌ಗಳು ದತ್ತಾಂಶ ಕೇಂದ್ರಗಳ ಬೃಹತ್ ಇಂಧನ ಬೇಡಿಕೆಯನ್ನು ಪೂರೈಸಲು ಕಾರ್ಯಸಾಧ್ಯ ಮತ್ತು ಪ್ರಾಯೋಗಿಕ ಪರಿಹಾರಗಳನ್ನು ಒದಗಿಸುತ್ತವೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಸ್ಥಿರ ಬಳಕೆ ಮತ್ತು ಪರಿವರ್ತನೆಗಾಗಿ ಪರಮಾಣು ಶಕ್ತಿಯ ಪ್ರಗತಿ ಮಸೂದೆ ಅಂಗೀಕಾರದೊಂದಿಗೆ ದೇಶ ಈಗ ಉದಯೋನ್ಮುಖ ಕೃತಕ ಬುದ್ಧಿಮತ್ತೆ ಆಧಾರಿತ ಆರ್ಥಿಕತೆಗೆ ಶಕ್ತಿ ತುಂಬಲು ಸಂಪೂರ್ಣವಾಗಿ ಸಿದ್ಧವಾಗಿದೆ ಎಂದರು. ನೂತನ ಕ್ರಮಗಳು ೧೪ ಎಕರೆ ಭೂಮಿಯಲ್ಲಿ ಪರಮಾಣು ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಅನುವು ಮಾಡಿಕೊಡುತ್ತದೆ. ಪರಮಾಣು ವಿದ್ಯುತ್ ಸ್ಥಾವರಗಳನ್ನು ರೈಲ್ವೆ ಕಾರ್ಯಾಚರಣೆಗಳಿಗೂ ಬಳಸಬಹುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

ಚಳಿಗಾಲದ ಅಧಿವೇಶನದಲ್ಲಿ ಸಂಸತ್ ಅಂಗೀಕರಿಸಿದ ಈ ಮಸೂದೆಗೆ ಕಳೆದ ತಿಂಗಳು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅನುಮೋದನೆ ನೀಡಿದ್ದಾರೆ.

************

ಮುಂದಿನ ಎರಡು ದಶಕಗಳಲ್ಲಿ ದೇಶದ ಭವಿಷ್ಯದ ಬೆಳವಣಿಗೆಯನ್ನು ಬಾಹ್ಯಾಕಾಶ, ಜೈವಿಕ ತಂತ್ರಜ್ಞಾನ, ಶುದ್ಧ ಇಂಧನ ಸೇರಿದಂತೆ ನಾವಿನ್ಯತೆ ಆಧಾರಿತ ವಲಯಗಳು ಮುನ್ನಡೆಸಲಿವೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ. ಜಿತೇಂದ್ರ ಸಿಂಗ್ ಅಭಿಪ್ರಾಯಪಟ್ಟಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಇಲಾಖೆಗಳು ಮತ್ತು ಸಚಿವಾಲಯಗಳಲ್ಲಿ ಕೈಗೊಂಡಿರುವ ಪ್ರತಿಯೊಂದು ಪ್ರಮುಖ ಸುಧಾರಣೆಯು ತಂತ್ರಜ್ಞಾನ ಆಧಾರಿತವಾಗಿವೆ ಎಂದು ಹೇಳಿದರು. ಒಂದು ಲಕ್ಷ ಕೋಟಿ ರೂಪಾಯಿಗಳ ಸಂಶೋಧನಾ ಅಭಿವೃದ್ಧಿ ಮತ್ತು ನಾವಿನ್ಯತೆ ನಿಧಿಯು ಖಾಸಗಿ ವಲಯದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ. ೨೦೨೭ರಲ್ಲಿ ಭಾರತೀಯ ಗಗನಯಾತ್ರಿಯೊಬ್ಬರು ಬಾಹ್ಯಾಕಾಶಕ್ಕೆ ಪ್ರಯಾಣಿಸಲಿದ್ದಾರೆ. ಅಲ್ಲದೆ ಭಾರತ ೬ ಸಾವಿರ ಮೀಟರ್ ಆಳದ ಸಮುದ್ರಕ್ಕೆ ಮಾನವಸಹಿತ ಜಲಾಂತರ್ಗಾಮಿ ನೌಕೆಯನ್ನು ಕಳುಹಿಸಲಿದೆ. ಇದು ಐತಿಹಾಸಿಕ ಸಾಧನೆಯನ್ನು ಸೂಚಿಸಲಿದೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದರು.

************

೧೯ ವರ್ಷದೊಳಗಿನವರ ಪುರುಷರ ಕ್ರಿಕೆಟ್‌ನಲ್ಲಿ, ಭಾರತ ತಂಡ ಇಂದು ಮೂರು ಪಂದ್ಯಗಳ ಸರಣಿಯ ಮೊದಲ ಏಕದಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ದಕ್ಷಿಣ ಆಫ್ರಿಕಾದ ಬೆನೋನಿಯ ವಿಲ್ಲೋಮೂರ್ ಪಾರ್ಕ್ ಕ್ರೀಡಾಂಗಣದಲ್ಲಿ ಭಾರತೀಯ ಕಾಲಮಾನ ಮಧ್ಯಾಹ್ನ ೧:೩೦ಕ್ಕೆ ಪಂದ್ಯ ಆರಂಭವಾಗಲಿದೆ. ಇದೇ ೧೫ ರಿಂದ ಪ್ರಾರಂಭವಾಗುವ ಐಸಿಸಿ ಅಂಡರ್ -೧೯ ವಿಶ್ವಕಪ್‌ಗೂ ಮೊದಲು, ಈ ಸರಣಿಯು ಎರಡೂ ತಂಡಗಳಿಗೆ ಪೂರ್ಣ ತಯಾರಿಯಾಗಲು ಸಹಾಯವಾಗುತ್ತದೆ. ಮಣಿಕಟ್ಟಿನ ಗಾಯದಿಂದಾಗಿ ಆಯುಷ್ ಮ್ಹಾತ್ರೆ ಸರಣಿಯಿಂದ ಹೊರಗುಳಿಯುವುದರಿಂದ ವೈಭವ್ ಸೂರ್ಯವಂಶಿ ಸರಣಿಯಲ್ಲಿ ಭಾರತವನ್ನು ಮುನ್ನಡೆಸಲಿದ್ದಾರೆ.

************

ರಾಂಚಿಯ ಮರಾಂಗ್ ಗೊಮ್ಕೆ ಜೈಪಾಲ್ ಸಿಂಗ್ ಮುಂಡಾ ಆಸ್ಟ್ರೋ ಟರ್ಫ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ೨೦೨೫-೨೬ರ ಮಹಿಳಾ ಹಾಕಿ ಇಂಡಿಯಾ ಲೀಗ್‌ನಲ್ಲಿ ರಾಂಚಿ ರಾಯಲ್ಸ್ ತಂಡ, ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ತಂಡವನ್ನು ೨-೦ ಗೋಲುಗಳಿಂದ ಸೋಲಿಸಿತು. ರುತುಜಾ ದಾದಾಸೊ ಪಿಸಲ್ ಮತ್ತು ಸಾಕ್ಷಿ ರಾಣಾ ಸಂಜೆಯ, ತಲಾ ಒಂದು ಗೋಲು ಗಳಿಸಿದರು.

************

ಏಳು ಬಾರಿಯ ಗ್ರ್ಯಾಂಡ್ ಸ್ಲಾಮ್ ಚಾಂಪಿಯನ್ ವೀನಸ್ ವಿಲಿಯಮ್ಸ್  ಇದೇ ೧೮ ರಂದು ಪ್ರಾರಂಭವಾಗಲಿರುವ ಆಸ್ಟ್ರೇಲಿಯನ್ ಓಪನ್ ಟೆನಿಸ್ ಪಂದ್ಯಾವಳಿಯಲ್ಲಿ ಮಹಿಳಾ ವೈಲ್ಡ್‌ಕಾರ್ಡ್ ಪ್ರವೇಶ ಪಡೆದಿದ್ದಾರೆ. ೪೫ ವರ್ಷದ ವೀನಸ್ ವಿಲಿಯಮ್ಸ್ ಆಸ್ಟ್ರೇಲಿಯನ್ ಓಪನ್‌ನಲ್ಲಿ ಸ್ಪರ್ಧಿಸುತ್ತಿರುವ ಅತ್ಯಂತ ಹಿರಿಯ ಮಹಿಳಾ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

***********